# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಮೌಲ್ಯಮಾಪನ)ರವರ ಕಛೇರಿ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577451
ಮೊಬೈಲ್ ಸಂಖ್ಯೆ: 7022254993: ಇಮೇಲ್:regexamku@gamil.com

ಸಂಖ್ಯೆ:ಕುವಿ:ಪವಿ:ಪಿಜಿ-I: 7255 :2018-19: ದಿನಾಂಕ:23-10-2018 29

## ಪ್ರಕಟಣೆ

**ವಿಷಯ: ಡಿಸೆಂಬರ್-2018ರಲ್ಲಿ** ಜರುಗಲಿರುವ ವಿವಿಧ ಸ್ನಾತಕೋತ್ತರ ಪದವಿಯ ಸೆಮಿಸ್ಟರ್ ಪರೀಕ್ಷೆಗಳ ವೇಳಾಪಟ್ಟಿಗಳನ್ನು ಪ್ರಕಟಿಸುವ ಬಗ್ಗೆ.

*****

ಕುವೆಂಪು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಪದವಿಯ ಲಿಖಿತ ಪರೀಕ್ಷೆಗಳು **ದಿನಾಂಕ: 05-12-2018** ರಿಂದ ಪ್ರಾರಂಭವಾಗುತ್ತದೆ. ವಿವರವಾದ ವೇಳಾಪಟ್ಟಿಯನ್ನು ಪ್ರಕಟಣೆಯೊಂದಿಗೆ ಲಗತ್ತಿಸಲಾಗಿದೆ.

ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾದ ವಿವಿಧ ವಿಭಾಗದ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಗಳನ್ನು ಭರ್ತಿಮಾಡಿ ನಿಗದಿತ ದಿನಾಂಕದೊಳಗೆ ಶುಲ್ಕ ಸಂದಾಯ ಮಾಡಿ ವಿಭಾಗಾಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | ದಂಡ ಶುಲ್ಕವಿಲ್ಲದೆ | 14-11-2018 ರವರೆಗೆ |
| 3 | ದಂಡ ಶುಲ್ಕ ರೂ. 100=00ರಂತೆ | 15-11-2018 ರಿಂದ 19-11-2018 ರವರೆಗೆ |
| 4 | ದಂಡ ಶುಲ್ಕ ರೂ. 500=00ರಂತೆ | 20-11-2018 ರಿಂದ 27-11-2018 ರವರೆಗೆ |

### ಸ್ನಾತಕೋತ್ತರ ಸೆಮಿಸ್ಟರ್ ಸ್ಕೀಂ ಪರೀಕ್ಷೆಗಳು ವೃತ್ತಿಪರ ವಿದ್ಯಾರ್ಥಿಗಳಿಗೆ ಮಾತ್ರ

[M.C.A/M.T.A/M.B.A/MBFI/Journalism & Mass communication M.P.Ed/ M.Ed / Bio-Technology/ Bioinformatics/ Clinical Psychology/ Industrial Chemistry/ Bio Chemistry// Computer Science / Library & Information Science / MSW/ Pharmaceutical Chemistry/ Organic Chemistry/Applied Geology/ L.L.M

| | | ಪರೀಕ್ಷಾ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು |
|---|---|---|---|---|
| 1. | ಪ್ರತಿ ಸೆಮಿಸ್ಟರ್‌ನ ಪೂರ್ಣ ಪರೀಕ್ಷೆಗೆ | ರೂ.1620/- | ರೂ.180/- | ರೂ.1800/- |
| 2. | ಯಾವುದೇ ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಸೈದ್ಧಾಂತಿಕ) (ಪ್ರತಿ ಸೆಮಿಸ್ಟರ್ ಪ್ರತ್ಯೇಕವಾಗಿ) | ರೂ.320/- | ರೂ.180/- | ರೂ.500/- |
| 3. | ಯಾವುದೇ ಸೆಮಿಸ್ಟರ್‌ನ ಒಂದು ಪ್ರಾಕ್ಟಿಕಲ್ ಪರೀಕ್ಷೆಗೆ | ರೂ.320/- | ರೂ.180/- | ರೂ.500/- |

| ಸ್ನಾತಕೋತ್ತರ ಸೆಮಿಸ್ಟರ್ ಸ್ಕೀಂ ಪರೀಕ್ಷೆಗಳು<br>ವೃತ್ತಿಪರವಲ್ಲದ ಕೋರ್ಸುಗಳಿಗೆ ಮಾತ್ರ | | | | |
|---|---|---|---|---|
| | | ಪರೀಕ್ಷಾ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು |
| 01 | ಪ್ರತಿ ಸೆಮಿಸ್ಟರ್‌ನ ಪೂರ್ಣ ಪರೀಕ್ಷೆಗೆ | ರೂ.1430/- | ರೂ.180/- | ರೂ.1610/- |
| 02 | ಯಾವುದೇ ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಥಿಯರಿ) (ಪ್ರತಿ ಸೆಮಿಸ್ಟರ್ ಪ್ರತ್ಯೇಕವಾಗಿ) | ರೂ.320/- | ರೂ.180/- | ರೂ.500/- |
| 03 | ಯಾವುದೇ ಸೆಮಿಸ್ಟರ್‌ನ ಒಂದು ಪ್ರಾಕ್ಟಿಕಲ್ ಪರೀಕ್ಷೆಗೆ | ರೂ.320/- | ರೂ.180/- | ರೂ.500/- |

## ವಿದ್ಯಾರ್ಥಿಗಳಿಗೆ ಸೂಚನೆ

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು www.kuvempu.ac.in ನಲ್ಲಿ student portalಗೆ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ನೆಟ್ ಬ್ಯಾಂಕಿನಲ್ಲಿ ಅಥವಾ ಯಾವುದೇ ಅಂಚೆ ಕಛೇರಿಯಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ವಿಭಾಗ / ಕಾಲೇಜುಗಳಲ್ಲಿ ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card/Credit Card/Online Banking SBM ನ Pay U ಅಥವಾ Paytm ಮೂಲಕ ನೇರವಾಗಿ ಹಣಪಾವತಿಸಬಹುದಾಗಿದೆ, ಅಥವಾ ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಅಂಚೆಕಛೇರಿ ಮುಖಾಂತರ ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ವಿಭಾಗ / ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯಮಾಡಲಾಗುವುದಿಲ್ಲ.

ಅ. ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 180/-ನ್ನು ಪಾವತಿಸಬೇಕು.

ಆ. ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಇ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ- 54023036246 ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳತಕ್ಕದ್ದು.

ಪ್ರವರ್ಗ-1ಕ್ಕೆ 2.5ಲಕ್ಷ ಹಾಗೂ ರೂ. 1 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ, 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ

ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.

3. **<u>ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಮೇಲ್ಕಂಡ ಮೀಸಲಾತಿಗೆ ಒಳಪಡುವ ವರ್ಗಗಳ ಮರುಯತ್ನದ (Repeaters) ವಿದ್ಯಾರ್ಥಿಗಳಿಗೆ ಹಾಗೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.</u>**

4. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿಭಾಗ / ಕಾಲೇಜಿಗೆ ಒಪ್ಪಿಸಬೇಕು.

5. ವಿದ್ಯಾರ್ಥಿಗಳು ಪರೀಕ್ಷೆ ಕಟ್ಟುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡುವುದಿಲ್ಲ.

6. ಈಗಾಗಲೇ ಸವಾಲಿನ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.

7. **ಡಿಸೆಂಬರ್-2018**ರಲ್ಲಿ ನಡೆಯಲಿರುವ ಈ ಪರೀಕ್ಷೆಗಳು **<u>ಬೆಸಸೆಮಿಸ್ಟರ್ ಪರೀಕ್ಷೆಗಳಾಗಿದ್ದು, ಸಮ ಸೆಮಿಸ್ಟರ್‌ನ ಅನುತ್ತೀರ್ಣ ಪತ್ರಿಕೆಗಳನ್ನು ಬೆಸಸೆಮಿಸ್ಟರ್ ಪತ್ರಿಕೆಗಳೊಂದಿಗೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.</u>**

8. ಆದರೆ, ಈಗಾಗಲೇ ನಾಲ್ಕನೇ / ಆರನೇ ಸೆಮಿಸ್ಟರ್ (ಸಿ.ಬಿ.ಸಿ.ಎಸ್. ಸ್ಕೀಂನ ವಿದ್ಯಾರ್ಥಿಗಳಿಗೆ ಮಾತ್ರ) ಮುಗಿದಿದ್ದು, ನಂತರವೂ ವಿದ್ಯಾರ್ಥಿ ಒಂದು ವೇಳೆ ತನ್ನ ಹಿಂದಿನ ಸೆಮಿಸ್ಟರ್‌ನ ಯಾವುದೇ ವಿಷಯ (ಪತ್ರಿಕೆ)ಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ, ಸದರಿ ವಿದ್ಯಾರ್ಥಿಯು ಮುಂದಿನ **ಬೆಸ** ಸೆಮಿಸ್ಟರ್ ಪರೀಕ್ಷೆಗೆ ವಿಶೇಷ ಶುಲ್ಕ ಪಾವತಿಸುವ ಅಗತ್ಯವಿರುವುದಿಲ್ಲ. ಆದರೆ **ಸಮ** ಸೆಮಿಸ್ಟರ್ ಪರೀಕ್ಷೆಗಳ ಪ್ರತಿ ಒಂದು ಪತ್ರಿಕೆಗೆ ರೂ.1390/- ವಿಶೇಷ ಶುಲ್ಕ+ಪ್ರತಿ ಪತ್ರಿಕೆಗೆ ರೂ. 320/- ಅಂಕಪಟ್ಟಿ ಶುಲ್ಕ 180/- ಒಟ್ಟು ರೂ.1890/-ನ್ನು ಪಾವತಿಸಿ **ಬೆಸ** ಸೆಮಿಸ್ಟರ್ ಪರೀಕ್ಷೆಗಳ ಜೊತೆ ಪರೀಕ್ಷೆ ತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ.

9. ನಿಯಮಾನುಸಾರ ಫಲಿತಾಂಶ ಪ್ರಕಟಗೊಂಡ 15 ದಿನಗಳೊಳಗಾಗಿ ವಿದ್ಯಾರ್ಥಿಗಳು ಸವಾಲಿನ ಮೌಲ್ಯಮಾಪನಕ್ಕೆ ರೂ. 2250/-ಗಳ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

..... 4

## ವಿಭಾಗದ ಮುಖ್ಯಸ್ಥರು / ಪ್ರಾಚಾರ್ಯರಿಗೆ ಸೂಚನೆಗಳು

1. ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು. ಹಾಗೂ ಒಂದು ಪ್ರತಿಯನ್ನು ವಿಭಾಗದಲ್ಲಿ ಮಾಹಿತಿಗಾಗಿ ಸಂರಕ್ಷಿಸಿಕೊಳ್ಳುವುದು.

2. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ವಿಭಾಗದ ಮುಖ್ಯಸ್ಥರೇ ನೇರ ಜವಾಬ್ದಾರಾಗಿರುತ್ತಾರೆ.

3. ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 180/-ನ್ನು ಪಾವತಿಸಬೇಕು.

4. ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

5. **ಶುಲ್ಕ ವಿನಾಯಿತಿ ಅರ್ಹತೆ ಹೊಂದಿರುವ ಎಲ್ಲಾ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ನಂತರವೇ OASISನಲ್ಲಿ college log in ಆಗಿ Utility ಯಲ್ಲಿನ Confirm Category option ನಲ್ಲಿ Fee typeಗೆ Low income ಎಂದು ನಮೂದಿಸಬೇಕು. ಇಲ್ಲವಾದಲ್ಲಿ online ನಲ್ಲಿ ವಿದ್ಯಾರ್ಥಿಗಳು ಪೂರ್ಣ ಶುಲ್ಕ ಪಾವತಿಸಬೇಕಾಗುತ್ತದೆ.**

6. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ- 54023036246 ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ವಸೂಲು ಮಾಡಿ ಮಾಹಿತಿಯನ್ನು (Hard Copy)ಯಲ್ಲಿ ಪರೀಕ್ಷಾ ವಿಭಾಗದ ಲೆಕ್ಕಶಾಖೆಗೆ ಸಲ್ಲಿಸುವುದು.

7. ಕಡೇ ದಿನಾಂಕದ ನಂತರ ಪರೀಕ್ಷಾಂಗ ವಿಭಾಗದಲ್ಲಿ ಪ್ರತಿ ವಿಭಾಗ / ಕಾಲೇಜಿನ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪರಿಶೀಲಿಸಲಾಗುವುದು. ಶುಲ್ಕಪಾವತಿ ಸಮರ್ಪಕವಾಗಿ ಕಂಡುಬರದೇ ಇರುವ ಪಕ್ಷದಲ್ಲಿ ಆ ವಿದ್ಯಾರ್ಥಿಯ ಪರೀಕ್ಷಾ ಪ್ರವೇಶ ಪತ್ರವನ್ನು ನೀಡಲಾಗುವುದಿಲ್ಲ.

8. ಪ್ರಾಯೋಗಿಕ ಪರೀಕ್ಷೆಗೆ ಅಗತ್ಯವಾದ ಉತ್ತರ ಪತ್ರಿಕೆ / ಲೇಖನ ಸಾಮಾಗ್ರಿ ಹಾಗೂ ಮುದ್ರಿತ ನಮೂನೆಗಳಿಗೆ ಬೇಡಿಕೆಪಟ್ಟಿಗಳನ್ನು **ದಿನಾಂಕ: 08-11-2018 ರೊಳಗಾಗಿ** ತಲುಪಿಸಲು ಸೂಚಿಸಿದೆ.

9. ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು **ದಿನಾಂಕ: 08-11-2018 ರೊಳಗಾಗಿ ಶ್ರೀಮತಿ ಶಕುಂತಲ ಹೆಚ್. ವೈ., ಅಧೀಕ್ಷಕರು, ಪರೀಕ್ಷಾ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ.**

10. ಪ್ರಶ್ನೆ ಪತ್ರಿಕೆಗಳ ಬೇಡಿಕೆಯನ್ನು **ದಿನಾಂಕ: 08-11-2018 ರೊಳಗಾಗಿ** ಡಾ.ಕೆ.ಯೋಗೇಂದ್ರ, **ಉಪಕುಲಸಚಿವ (ಪರೀಕ್ಷಾಂಗ) ಇವರಿಗೆ ತಲುಪಿಸಲು ಸೂಚಿಸಿದೆ.**

11. **ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, ಆನ್‌ಲೈನ್ ಮೂಲಕ ನಮೂದಿಸಿ ನಂತರ Freeze ಮಾಡಬೇಕು.**

12. **ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ, ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.**

13. ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳಿಂದ ಪರೀಕ್ಷೆಗಳಿಗೆ ಅರ್ಜಿಯನ್ನು ಸ್ವೀಕರಿಸಬಾರದು, ಮತ್ತು ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡ ನಡೆಸಬಾರದು. ಅಂತಹ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿ ಸ್ವೀಕರಿಸಿದಲ್ಲಿ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು / ಕಾಲೇಜಿನ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ.

14. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿರುವಂತಹ (ಕಾಲೇಜು ಮತ್ತು ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿ) ವಿಭಾಗ / ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದೊಳಗೆ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

15. **ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕ ಬಿಟ್ಟುಹೋದಲ್ಲಿ ಯಾವ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ವಿಭಾಗ / ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.**

16. ಸ್ನಾತಕ ಪದವಿಯ ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ಸ್ನಾತಕೋತ್ತರ ವಿದ್ಯಾರ್ಥಿಗಳ ಆಂತರಿಕ ಪರೀಕ್ಷೆಗಳಿಗೆ ಉಪಯೋಗಿಸಬಾರದು, ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ವಿದ್ಯಾರ್ಥಿಗಳು ಪ್ರತ್ಯೇಕವಾಗಿ ಖರೀದಿಸಲು ಸೂಚಿಸಲಾಗಿದೆ.

25/10/18

(ಪ್ರೊ. ರಾಜಾನಾಯಕ)
ಕುಲಸಚಿವರು(ಪರೀಕ್ಷಾಂಗ)

**ಕುಲಸಚಿವರು (ಪರೀಕ್ಷಾಂಗ)**
**ಕುವೆಂಪು ವಿಶ್ವವಿದ್ಯಾನಿಲಯ,**
**ಜ್ಞಾನ ಸಹ್ಯಾದ್ರಿ,**
**ಶಂಕರಘಟ್ಟ-577 451.**

***ಇವರಿಗೆ,***

01. ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ./ಶಿವಮೊಗ್ಗ/ಕಡೂರು.
02. ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ, ಕಡೂರು./ ಐ.ಡಿ.ಎಸ್.ಜಿ. ಕಾಲೇಜು ಕ್ಯಾಂಪಸ್, ಚಿಕ್ಕಮಗಳೂರು
03. ಅಧ್ಯಕ್ಷರು, ಸ್ನಾತಕೋತ್ತರ ಸಂಸ್ಕೃತ ಅಧ್ಯಯನ ವಿಭಾಗ, ಸಹ್ಯಾದ್ರಿ ಕಾಲೇಜು, ಆವರಣ, ಶಿವಮೊಗ್ಗ.

04. ಅಧ್ಯಕ್ಷರು, ಸ್ನಾತಕೋತ್ತರ ಉರ್ದು ಅಧ್ಯಯನ ವಿಭಾಗ, ಸಹ್ಯಾದ್ರಿ ಕಾಲೇಜು, ಆವರಣ, ಶಿವಮೊಗ್ಗ.

05. ಅಧ್ಯಕ್ಷರು, ಮನೋವಿಜ್ಞಾನ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಸಹ್ಯಾದ್ರಿ ಕಾಲೇಜು ಆವರಣ, ಶಿವಮೊಗ್ಗ.

06. ಪ್ರಾಂಶುಪಾಲರು, ಸಹ್ಯಾದ್ರಿ ವಿಜ್ಞಾನ ಕಾಲೇಜು, ಶಿವಮೊಗ್ಗ.

07. ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಕಾಲೇಜು, ಶಿವಮೊಗ್ಗ.

08. ಪ್ರಾಂಶುಪಾಲರು, ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಶಿವಮೊಗ್ಗ.

09. ಪ್ರಾಂಶುಪಾಲರು, ಆಚಾರ್ಯ ತುಳಸಿ ನ್ಯಾಷನಲ್ ಕಾಲೇಜು, ಶಿವಮೊಗ್ಗ.

10. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿವಮೊಗ್ಗ.

11. ಪ್ರಾಂಶುಪಾಲರು, ಜ್ಞಾನಸಾಗರ ಮಹಾವಿದ್ಯಾಲಯ, ಅಕ್ಷರ ಪಿ.ಜಿ. ಸೆಂಟರ್, ಜೆ.ಎನ್.ಎನ್.ಸಿ.ಇ. ಎದುರು ಅಕ್ಷರನಗರ, ಚಿನ್ನಂ ಮಂಜಪುರ, ಸವಳಂಗ ರಸ್ತೆ, ಶಿವಮೊಗ್ಗ.

12. ಪ್ರಾಂಶುಪಾಲರು, ಪಿ.ಇ.ಎಸ್. ಇನ್ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಶಿವಮೊಗ್ಗ.

13. ಪ್ರಾಂಶುಪಾಲರು, ಕೊಡಚಾದ್ರಿ ಪ್ರಥಮ ದರ್ಜೆ ಕಾಲೇಜು, ಹೊಸನಗರ.

14. ಪ್ರಾಂಶುಪಾಲರು, ತುಂಗಾ ಮಹಾವಿದ್ಯಾಲಯ, ತೀರ್ಥಹಳ್ಳಿ.

15. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತೀರ್ಥಹಳ್ಳಿ.

16. ಪ್ರಾಂಶುಪಾಲರು, ಸರ್.ಎಂ.ವಿ. ಸರ್ಕಾರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಭದ್ರಾವತಿ.

17. ಪ್ರಾಂಶುಪಾಲರು, ಸರ್.ಎಂ.ವಿ. ಸರ್ಕಾರಿ ವಿಜ್ಞಾನ ಕಾಲೇಜು, ಭದ್ರಾವತಿ.

18. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭದ್ರಾವತಿ.

19. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿಕಾರಿಪುರ.

20. ಪ್ರಾಂಶುಪಾಲರು, ಎಲ್.ಬಿ ಮತ್ತು ಎಸ್.ಬಿ.ಎಸ್. ಕಾಲೇಜು, ಸಾಗರ.

21. ಪ್ರಾಂಶುಪಾಲರು, ಇಂದಿರಾಗಾಂಧಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಸಾಗರ.

22. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಡೂರು.

23. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಪ್ಪ.

24. ಪ್ರಾಂಶುಪಾಲರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎನ್.ಆರ್.ಪುರ.

25. ಪ್ರಾಂಶುಪಾಲರು, ಐ.ಡಿ.ಎಸ್.ಜಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಮಗಳೂರು.

26. ಪ್ರಾಂಶುಪಾಲರು, ಎಂ.ಇ.ಎಸ್/ಎಂ.ಪಿ.ಎಸ್ ಪ್ರಥಮ ದರ್ಜೆ ಮಹಿಳಾ ಕಾಲೇಜು, ಚಿಕ್ಕಮಗಳೂರು.

27. ಪ್ರಾಂಶುಪಾಲರು, ಶ್ರೀ.ಜಗದ್ಗುರು ಚಂದ್ರಶೇಖರ ಭಾರತಿ ಮೆಮೊರಿಯಲ್ ಕಾಲೇಜು, ಶೃಂಗೇರಿ.

28. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

29. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

30. ಆಪ್ತಶಾಖೆ, ಮಾನ್ಯಕುಲಪತಿಗಳು, ಕುಲಸಚಿವ(ಆಡಳಿತ), ಕುಲಸಚಿವ(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

31. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಶೇಷಾದ್ರಿಪುರಂ ರಸ್ತೆ, ಬೆಂಗಳೂರು.

32. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

33. ಸಂಚಾಲಕರು, ಎಸ್.ಸಿ/ಎಸ್.ಟಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

34. ಸಂಚಾಲಕರು, ಓ.ಬಿ.ಸಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

35. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

36. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ

37. ಅಧೀಕ್ಷಕರು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ

38. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ – ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.

39. ನಿರ್ದೇಶಕರು, ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ

40. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

41. ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

42. ಕಛೇರಿ ಪ್ರತಿ.

43. ಪ್ರಾಂಶುಪಾಲರು, ಎಜುಕೇಟ್ ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಹಿಲ್ಕಿಕೆ, ಶಿವಮೊಗ್ಗ.